# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಕೆಂಪೇಗೌಡನಗರ ಉಪವಿಭಾಗ, ಬೃ.ಬೆಂ.ಮ.ಪಾಲಿಕೆ ಹೆಚ್. ಸಿದ್ದಯ್ಯ ರಸ್ತೆ, ಬೆಂಗಳೂರು

ಸಂಖ್ಯೆ:ಸ.ಇಂ/ವಾ–119/ವಾರ್ಡ್‌ಸಭೆ/2022–23

ದಿನಾಂಕ: 01-10-2022

### ವಾರ್ಡ್ –119ರ ವಾರ್ಡ್ ಸಭೆಯ ನಡವಳಿ

ದಿನಾಂಕ:01–10–2022 ರಂದು ಕೆಂಪೇಗೌಡನಗರ ಉಪವಿಭಾಗ ವಾರ್ಡ್–119 ರ ವಾರ್ಡ್ ಕಛೇರಿಯಲ್ಲಿ ಶ್ರೀ.ಎಸ್.ಟಿ.ಶ್ರೀನಿವಾಸ್ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕಾರ್ಯಪಾಲಕ ಅಭಿಯಂತರರು(ಟಿ.ಇ.ಸಿ)ವಿಭಾಗ ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿಗಳು.

ಹಾಜರಿದವರು:–

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ.ಎಸ್.ಟಿ.ಶ್ರೀನಿವಾಸ್ | ನೋಡಲ್ ಅಧಿಕಾರಿಗಳು | 9739520995 |
| 2 | ಶ್ರೀ.ಎನ್.ಕೆ.ಸತ್ಯ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ:119 | 9480688119 |
| 3 | ಶ್ರೀ.ಆರ್.ದೊರೈರಾಜ್ | ಕಂದಾಯ ಪರಿವೀಕ್ಷಕರು ವಾರ್ಡ್–119 | 9900595529 |
| 4 | ಶ್ರೀ. ಕರ್ತಿಕ್ | ಕಿರಿಯ ಅಭಿಯಂತರರು ಬೆಸ್ಕಾಂ | 9449875558 |
| 5 | ಬಿ.ಎಲ್.ಅರವಿಂದ್ | ಕೆಲಸ ಪರಿವೀಕ್ಷಕರು–ಬಿ.ಡಬ್ಲೂ.ಎಸ್.ಎಸ್.ಬಿ | 9448314149 |
| 6 | ಎಂ.ಬಾಬುಕುಮಾರ್ | ಕೆಲಸ ಪರಿವೀಕ್ಷಕರು ವಾರ್ಡ್–119 | 9008233973 |
| 7 | ಎನ್.ನಾಗರಾಜು | ಕಿರಿಯ ಆರೋಗ್ಯ ಪರಿವೀಕ್ಷಕರು | 8073493562 |
| 8 | ಸಂದೇಶ್.ಹಚ್.ಎಂ | ಸ.ಅ(ವಾರ್ಡ್–119) | 9611667101 |
| 9 | ಸುರೇಶ್ | ಕಿರಿಯ ಆರೋಗ್ಯ ಪರಿವೀಕ್ಷಕರು | 9480688719 |
| 10 | ಸಿ.ಮಂಜುನಾಥ | ಸ್ಥಳೀಯರು | |
| 11 | ರಫ಼ | ಸ್ಥಳೀಯರು | |

ಮಾನ್ಯ ಅಧ್ಯಕ್ಷರು, ಮೇಲ್ಕಂಡ ಎಲ್ಲರನ್ನು ಸ್ವಾಗತದೊಂದಿಗೆ ಪರಸ್ಪರ ಪರಿಚಯ ಮಾಡಿಕೊಳ್ಳಲು ತಿಳಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು.

**ಚರ್ಚಿಸಲಾದ ವಿಷಯಗಳು:–**

ಕಾಮಗಾರಿ ವಿಷಯವಾಗಿ ಚರ್ಚಿಸಲಾಗಿ ಸ್ಥಳೀಯರು ಕಬ್ಬನ್‌ಪೇಟೆ, ಎ.ಟಿ. ಸ್ಟ್ರೀಟ್‌ನಲ್ಲಿ ಸರ್ವಾಜನಿಕರು ಓಡಾಡಲು ತುಂಬಾ ತೊಂದರೆ ಉಂಟಾಗಿದ್ದು, ರಸ್ತೆಯಲ್ಲಿ ಪಾದಚಾರಿ ಮೇಲೆ ಇಟ್ಟಿರುವ ಅಂಗಡಿಗಳನ್ನು ತೆರವುಗೊಳಿಸಲು ಸಭೆಯಲ್ಲಿ ತಿಳಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂನವರು ಮರದ ಕೊಂಬೆಗಳನ್ನು ತೆರವುಗೊಳಿಸಿ ರಸ್ತೆಯಲ್ಲಿಯೇ ಬಿಟ್ಟಿರುವುದರಿಂದ ತೊಂದರೆಯಾಗುತ್ತಿದ್ದು ಕೂಡಲೇ ತೆರವುಗೊಳಿಸಲು ಕ್ರಮ ವಹಿಸುವಂತೆ ಕೋರಿದರು ಹಸಿಕಸ ಮತ್ತು ಒಣಕಸವನ್ನು ವಿಂಗಡಿಸಿಕೊಡುವಮತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು.

ಗಾಣಿಗರ್ ಎ ಗಲ್ಲಿಯಲ್ಲಿ ಕಸದ ರಾಶಿ ಬಿದ್ದಿರುವುದು ಇದರಿಂದಾಗಿ ವಾರ್ಡ್‌ನಲ್ಲಿ ಸೊಳ್ಳೆಗಳು ಹೆಚ್ಚಾಗಿರುವುದರಿಂದ ಕಸವನ್ನು ಸಮರ್ಪಕವಾಗಿ ವಿಲೇವಾರಿ ಮಾಡುವಂತೆ ಸಭೆಯಲ್ಲಿ ತಿಳಿಸಿದರು.

ನಂತರ ವಾರ್ಡ್ ಅಭಿಯಂತರರು ಮಾತನಾಡಿ ಬೆಸ್ಕಾಂ ವತಿಯಿಂದ ಹಳೆಯ ಟ್ರಾನ್ಸ್‌ಫಾರ್ಮರ್‌ಗಳ ದುರಸ್ತಿ ಕಾರ್ಯ ನಡೆಯುತ್ತಿರುವುದರಿಂದ ಕಾಮಗಾರಿಗಳು ಮುಗಿದ ತಕ್ಷಣ ಸ್ಥಳಗಳಲ್ಲಿರುವ ಕೇಬಲ್ ಮತ್ತು ನಿರುಪಯುಕ್ತ ವಸ್ತುಗಳನ್ನು ತೆರವುಗೊಳಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಟ್ರಾನ್ಸ್‌ಫಾರ್ಮರ್‌ಗಳ ಬದಲಾವಣೆಯ ಕಾಮಗಾರಿಯು ಮುಗಿದ ತಕ್ಷಣ ಸ್ಥಳಗಳಲ್ಲಿರುವ ನಿರುಪಯುಕ್ತ ವಸ್ತುಗಳನ್ನು ಕೂಡಲೇ ತೆರವುಗೊಳಿಸುವುದಾಗಿ ಸಭೆಗೆ ತಿಳಿಸಿದರು.

ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಕೆಲಸ ಪರಿವೀಕ್ಷಕರಿಗೆ ಮಳೆ ಹೆಚ್ಚಾಗಿರುವುದರಿಂದ ದೂರುಗಳನ್ನು ಕೂಡಲೇ ಸ್ಪಂದಿಸಬೇಕೆಂದು ತಿಳಿಸಿರುತ್ತಾರೆ ಹಾಗೂ ಮುಂದಿನ ಸಭೆಗೆ ಕಡ್ಡಾಯವಾಗಿ ಎಲ್ಲಾ ಅಧಿಕಾರಿಗಳಿಗೆ ವಾರ್ಡ್ ಸಮಿತಿ ಸಭೆಗೆ ಸಮಯಕ್ಕೆ ಸರಿಯಾಗಿ ಹಾಜರಾಗುವಂತೆ ಸೂಚಿಸಿ, ತಪ್ಪಿದಲ್ಲಿ ಹಾಜರಾಗದ ಅಧಿಕಾರಿಗಳಿಗೆ ನೋಟೀಸ್ ಜಾರಿ ಮಾಡಲು ತಿಳಿಸಿರುತ್ತಾರೆ. ಹಾಜರಿದ್ದ ಅಧಿಕಾರಿಗಳಿಗೆ ಸಮನ್ವಯ ಸಾಧಿಸಿಕೊಂಡು ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ, ಪರಿಹರಿಸಲು ಸಹಕಾರ ನೀಡುವಂತೆ ಕೋರುತ್ತಾ, ಸಭೆಗೆ ಹಾಜರಿದ್ದ ಎಲ್ಲಾರಿಗೂ ವಂದನೆಗಳನ್ನು ಅರ್ಪಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಕಾರ್ಯದರ್ಶಿಗಳು ಹಾಗೂ<br>ಸಹಾಯಕ ಅಭಿಯಂತರರು<br>ವಾರ್ಡ್ –119 ಧರ್ಮರಾಯಸ್ವಾಮಿ ದೇವಸ್ಥಾನ | 1/10/2022<br>ನೋಡಲ್ ಅಧಿಕಾರಿಗಳು<br>ವಾರ್ಡ್ ಸಂಖ್ಯೆ: 119 |